ಕರ್ನಾಟಕ ಸರ್ಕಾರ
ವಾಣಿಜ್ಯತೆರಿಗೆ ಇಲಾಖೆ

T. NO. 3081/16-17

ಸಂ.ವಾತೆಅಆ/ಜಾರಿ/ದವ/ವಾ.ಶಾ./ಸಿಆರ್.44/2016-17

ವಾಣಿಜ್ಯ ತೆರಿಗೆ ಅಪರ ಆಯುಕ್ತರವರ ಕಚೇರಿ
(ಜಾರಿ)-ದಕ್ಷಿಣ ವಲಯ,3ನೇ ಮಹಡಿ, ಬಿ ಬ್ಲಾಕ್
ವಾಣಿಜ್ಯ ತೆರಿಗೆ ಕಾರ್ಯಾಲಯ, ಕೋರಮಂಗಲ,
ಬೆಂಗಳೂರು-47, ದಿನಾಂಕ 20-02-2017.

## ಸಾರ್ವಜನಿಕ ಬಹಿರಂಗ ಹರಾಜು ಪ್ರಕಟಣೆ

ವಿಷಯ: ಈ ವಿಭಾಗದಲ್ಲಿರುವ ನಿರುಪಯುಕ್ತ ವಾಹನಗಳನ್ನು ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡುವ ಬಗ್ಗೆ.

ಉಲ್ಲೇಖ:1) ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿ(ಕೇಂದ್ರ) ಕೋರಮಂಗಲ ಬೆಂಗಳೂರು ಇವರ ತಪಾಸಣಾ ವರದಿ ದಿ.29-9-2016 ಮತ್ತು 01-10-2016.
2) ಮಾನ್ಯ ವಾಣಿಜ್ಯ ತೆರಿಗೆ ಆಯುಕ್ತರು, ಕರ್ನಾಟಕ, ಬೆಂಗಳೂರು ಇವರ ಪತ್ರ ಸಂ.ವಿಹೆಚ್‌ಟಿ.ಸಿಆರ್.11/2015-16 ದಿ.20-12-2016.
3) ಈ ಕಛೇರಿಯ ಸಾರ್ವಜನಿಕ ಬಹಿರಂಗ ಹರಾಜು ಪ್ರಕಟಣೆ ದಿ:17-01-2017

* * * *

ಸಾರ್ವಜನಿಕ ಮಾಹಿತಿಗಾಗಿ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಉಲ್ಲೇಖ (1) ಮತ್ತು (2)ರ ಆದೇಶದಂತೆ ದಿನಾಂಕ: 28-02-2017 ರಂದು ಮದ್ಯಾಹ್ನ 2.30 ಗಂಟೆಗೆ ಈ ಕಛೇರಿಯ ಈ ಕೆಳಕಂಡ ವಾಹನಗಳು ನಿರಪಯುಕ್ತವಾಗಿರುವ ಕಾರಣ, ಸಂಬಂಧಿಸಿದ ಅಪರ ಆಯುಕ್ತರು(ಜಾರಿ) ಇವರಿಂದ ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲಾಗುವುದು. ವಿವರಗಳು ಈ ಕೆಳಕಂಡಂತೆ ಇರುತ್ತದೆ.

| | | |
|---|---|---|
| 1 | ಬಹಿರಂಗ ಹರಾಜು ದಿನಾಂಕ | 28-02-2017 |
| 2 | ಹರಾಜು ಮಾಡುವ ಸ್ಥಳ | ವಾಣಿಜ್ಯ ತೆರಿಗೆ ಅಪರ ಆಯುಕ್ತರವರ ಕಚೇರಿ (ಜಾರಿ)-ದಕ್ಷಿಣ ವಲಯ,3ನೇ ಮಹಡಿ, ಬಿ ಬ್ಲಾಕ್ ವಾಣಿಜ್ಯತೆರಿಗೆ ಕಾರ್ಯಾಲಯ-2 ಕೋರಮಂಗಲ, ಬೆಂಗಳೂರು-47, |

| ಕ್ರ.ಸಂ. | ವಾಹನದ ಹೆಸರು | ವಾಹನ ಸಂಖ್ಯೆ | ತಯಾರಿಕೆ ವರ್ಷ | ಇಂಧನ | ಹರಾಜು ಮಾಡಲು ನಿಗದಿಪಡಿಸಿದ ಮೊತ್ತ |
|---|---|---|---|---|---|
| 1 | ಟಾಟಾ ಸುಮೋ | ಕೆಎ 02 ಜಿ 24 | 1999 | ಡೀಸೆಲ್ | 42,500-00 |
| 2 | ಟಾಟಾ ಸುಮೋ | ಕೆಎ 02 ಜಿ 27 | 1999 | ಡೀಸೆಲ್ | 42,500-00 |
| 3 | ಟಾಟಾ ಸುಮೋ | ಕೆಎ 02 ಜಿ 31 | 1999 | ಡೀಸೆಲ್ | 42,500-00 |
| 4 | ಟಾಟಾ ಸುಮೋ | ಕೆಎ 02 ಜಿ 3585 | 1999 | ಡೀಸೆಲ್ | 42,500-00 |
| 5 | ಟಾಟಾ ಸುಮೋ | ಕೆಎ 04 ಜಿ 59 | 2000 | ಡೀಸೆಲ್ | 41,000-00 |
| 6 | ಟಾಟಾ ಸುಮೋ | ಕೆಎ 04 ಜಿ 62 | 2000 | ಡೀಸೆಲ್ | 41,000-00 |
| 7 | ಟಾಟಾ ಸುಮೋ | ಕೆಎ 04 ಜಿ 63 | 1999 | ಡೀಸೆಲ್ | 41,000-00 |
| 8 | ಟಾಟಾ ಸುಮೋ | ಕೆಎ 04 ಜಿ 64 | 1999 | ಡೀಸೆಲ್ | 41,000-00 |
| 9 | ಅಂಬಾಸಿಡರ್ ಕಾರ್ | ಕೆಎ 04 ಜಿ 223 | 2000 | ಡೀಸೆಲ್ | 41,000-00 |

ನಿಬಂಧನೆಗಳು:

01) ಮೇಲೆ ತಿಳಿಸಿರುವ ನಿರುಪಯುಕ್ತ ವಾಹನಗಳನ್ನು ಸಾರ್ವಜನಿಕ ಬಹಿರಂಗ ಹರಾಜು ಮೂಲಕ ವಾಣಿಜ್ಯ ತೆರಿಗೆ ಅಪರ ಆಯುಕ್ತರು(ಜಾರಿ)-ದಕ್ಷಿಣ ವಲಯ, ಬೆಂಗಳೂರು ಇವರ ಸಮ್ಮುಖದಲ್ಲಿ ಅಥವಾ ಅವರು ನೇಮಿಸಿಲ್ಪಟ್ಟ ಅಧಿಕಾರಿಗಳ ಸಮ್ಮುಖದಲ್ಲಿ ನಡೆಸಲಾಗುವುದು.

02) ವಾಹನವನ್ನು ಎಲ್ಲಿ ಹೇಗಿದೆಯೋ ಹಾಗೆ ಬಹಿರಂಗ ಹರಾಜು ನಡೆಸಲಾಗುವುದು.

03) ಈ ಹರಾಜಿನಲ್ಲಿ ಪಾಲ್ಗೊಳ್ಳಬಯಸುವವರು ದಿ: 27-02-2017 ರಂದು ಯಾವ ವಾಹನದ ಸಂಬಂಧ ಹರಾಜಿನಲ್ಲಿ ಪಾಲ್ಗೊಳ್ಳುವವರು ಸದರಿ ವಾಹನದ ಹರಾಜು ಮಾಡಲು ನಿಗದಿಪಡಿಸಿದ ಕನಿಷ್ಠ ಮೌಲ್ಯದ ಶೇ.10ರಷ್ಟು ಹಣವನ್ನು ಠೇವಣಿ ಮಾಡಿ ರಸೀತಿ ಪಡೆಯತಕ್ಕದ್ದು. ಠೇವಣಿ ಪಾವತಿ ಮಾಡುವ ದಿನದಂದು ಗುರುತಿನ ಚೀಟಿಯನ್ನು ತರತಕ್ಕದ್ದು ಹಾಗೂ ಸದರಿ ಗುರುತಿನ ಚೀಟಿಯ ನಕಲನ್ನು ಸಲ್ಲಿಸುವುದು. ಠೇವಣಿಯು ಯಾರ ಹೆಸರಿನಲ್ಲಿ ಇರುವುದೋ ಅವರು ಮಾತ್ರ ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸುವ ಅವಕಾಶ ಇರುತ್ತದೆ. ಬೇರೆಯವರಿಗೆ ಅವಕಾಶ ಇರುವುದಿಲ್ಲ. ಗುರುತಿನ ಚೀಟಿ ಕಡ್ಡಾಯವಾಗಿರುತ್ತದೆ.

04) ವಾಹನವನ್ನು ಸಂಬಂಧಿಸಿದ ಅಧಿಕಾರಿಗಳಿಂದ ಅನುಮೋದನೆ ಸಿಕ್ಕ ನಂತರ 15 ದಿನಗಳೊಳಗಾಗಿ ಪೂರ್ತಿ ಹಣವನ್ನು ಪಾವತಿ ಮಾಡಿ ನಂತರ ಸ್ವಂತ ಖರ್ಚಿನಲ್ಲಿ ಯಥಾಸ್ಥಿತಿಯಲ್ಲಿ ಹಾಲಿ ಇರುವ ಜಾಗದಿಂದ ಸಾಗಿಸಿಕೊಳ್ಳತಕ್ಕದ್ದು.

05) ವಾಹನವನ್ನು ಪರೀಕ್ಷಿಸಲು ಈ ಕಛೇರಿಯಲ್ಲಿ ಕೆಲಸದ ದಿನಗಳಲ್ಲಿ ಬೆಳಗ್ಗೆ 10.00 ಗಂಟೆಯಿಂದ ಸಂಜೆ 5-30 ಗಂಟೆಯೊಳಗೆ ಪರಿಶೀಲಿಸಬಹುದು.

06) ಹರಾಜಿನಲ್ಲಿ ಹಣಕಟ್ಟಿ ಯಶಸ್ವಿ ಆಗದವರಿಗೆ ಕಟ್ಟಿದ ಹಣವನ್ನು ಕೂಡಲೇ ಹಿಂತಿರುಗಿಸಲಾಗುವುದು.

07) ಬಹಿರಂಗ ಹರಾಜು ಮುಗಿದ ಮೇಲೆ ಅತೀ ಹೆಚ್ಚು ಬಿಡ್ಡುದಾರರು ಕೂಡಲೇ ಮಾರಾಟದ ಮೊತ್ತ ಹಾಗೂ ತೆರಿಗೆಗಳು ಸೇರಿದಂತೆ ಶೇ.25 ಭಾಗ ಹಣವನ್ನು ಪಾವತಿ ಮಾಡದೇ ಹೋದಲ್ಲಿ ಠೇವಣಿ ಹಣವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.